ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 05/10/2019

# ಯತ್ನಾಳ್‌ಗೆ ಶೋಕಾಸ್ ನೋಟಿಸ್ ಜಾರಿ

**ಬೆಂಗಳೂರು:** ನೆರೆ ಪರಿಹಾರ ವಿಚಾರವಾಗಿ ಸ್ವಪಕ್ಷೀಯರ ವಿರುದ್ಧವೇ ಅಸಮಾಧಾನ ಹೊರಹಾಕಿದ್ದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಬಿಜೆಪಿ ಶುಕ್ರವಾರ ಶೋಕಾಸ್ ನೋಟಿಸ್ ಜಾರಿ ಮಾಡಿದೆ. ಕೇಂದ್ರದಿಂದ ನೆರೆ ಪರಿಹಾರ ಬಿಡುಗಡೆ ಮಾಡಿಸಿಕೊಂಡು ಬರುವಲ್ಲಿ ರಾಜ್ಯದ 25 ಸಂಸದರು ಬೇಜವಾಬ್ದಾರಿ ಮೆರೆಯುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯದ ಬಗ್ಗೆ ಗಂಭೀರವಾಗಿ ಆಲೋಚನೆ ಮಾಡಬೇಕಿದೆ ಎಂದು ನೀಡಿದ್ದ ಹೇಳಿಕೆ ಸಂಬಂಧ ನೋಟಿಸ್ ಜಾರಿ ಮಾಡಿರು ಬಿಜೆಪಿ, ಪಕ್ಷದ ಕೇಂದ್ರ ಶಿಸ್ತು ಸಮಿತಿಯು, ನಿಮ್ಮ ಹೇಳಿಕೆ ಪಕ್ಷ ವಿರೋಧಿಯಾಗಿದೆ. ಇದಕ್ಕಾಗಿ ನಿಮ್ಮನ್ನು ಏಕೆ ಅಮಾನತು ಮಾಡಬಾರದು ಎಂದು ಕಾರಣ ಕೇಳಿದೆ.

**ನಾನೇನು ಮಂತ್ರಿ ಪದವಿ ಸಿಕ್ಕಿಲ್ಲವೆಂದು ಅಸಮಾಧಾನಗೊಂಡಿಲ್ಲ... ಯಾವ ಆಧಾರದ ಮೇಲೆ ನನಗೆ ಪಕ್ಷ ವಿರೋಧಿ ಅಂತೀರಿ? ನನಗೆ ನಾಟಕ ಮಾಡಲು ಬರಲ್ಲ. ನಿಮ್ಮ ನೋಟಿಸ್‌ಗೆ ನಾನು ಬೆದರಲ್ಲ. ಉತ್ತರ ಕರ್ನಾಟಕದ ಜನರ ಪರ ಧ್ವನಿ ಎತ್ತಿದ್ದೇನೆ.**

| ಬಸನಗೌಡ ಪಾಟೀಲ ಯತ್ನಾಳ ಶಾಸಕ

